ಮಾಡಲಾಗುತ್ತಿದೆ. 8 ಗಂಟೆಗಳ ಅವಧಿಗೆ ಸಿಂಗಲ್ ಫೇಸ್‌ನಲ್ಲಿ ವಿದ್ಯುತ್ ಸರಬರಾಜು ಮಾಡಲಾಗುತ್ತಿದೆ. ಬಾಕಿ ಉಳಿದ 6 ಗಂಟೆಗಳ ಅವಧಿಯಲ್ಲಿ ವಿದ್ಯುತ್ ಸರಬರಾಜು ಇರುವುದಿಲ್ಲ. ಮುಂಗಾರು ಮಳೆ ಪ್ರಾರಂಭವಾಗುವವರೆಗೆ ಈ ಕ್ರಮಗಳು ಅನಿವಾರ್ಯವಾಗಿದೆ. ಇಲ್ಲದಿದ್ದಲ್ಲಿ ಇಡೀ ವಿದ್ಯುತ್ ವ್ಯವಸ್ಥೆಯೇ ಸಂಪೂರ್ಣವಾಗಿ ಕುಸಿಯುವ ಸಂಭವವಿರುತ್ತದೆ ಅಲ್ಲದೇ ಕೆಲವೊಮ್ಮೆ ಅನಿವಾರ್ಯ ಕಾರಣಗಳಿಂದಾಗಿ ಅಂದರೆ ಕೇಂದ್ರ ಸರ್ಕಾರದ ವಿದ್ಯುತ್ ಉತ್ಪಾದನಾ ಕೇಂದ್ರಗಳಲ್ಲಿ ಉಂಟಾಗುವ ತೊಂದರೆಗಳು ರಾಜ್ಯದಲ್ಲಿನ ವಿದ್ಯುತ್ ಉತ್ಪಾದನಾ ಕೇಂದ್ರಗಳಲ್ಲಿ ಉದ್ಭವಿಸುವ ಸಮಸ್ಯೆಗಳು, ವಿದ್ಯುತ್ ಪ್ರಸರಣಾ ಮಾರ್ಗದಲ್ಲಿ ಸಂಭವಿಸುವ ದೋಷಗಳು ಇತ್ಯಾದಿಗಳಿಂದಾಗಿ ಅನಿಯಮಿತ ಲೋಡ್ ಶೆಡ್ಡಿಂಗನ್ನೂ ಸಹ ನಿರ್ವಹಿಸಬೇಕಾಗುತ್ತದೆ. ಸಾರ್ವಜನಿಕರ ಸಹಕಾರ ಈ ದಿಸೆಯಲ್ಲಿ ಅಗತ್ಯವಾಗಿದೆ.

ಹುಬ್ಬಳ್ಳಿ ಧಾರವಾಡ ಮಹಾ ನಗರದಲ್ಲಿ ಹೈಕೋರ್ಟ್ ಪೀಠ ಸ್ಥಾಪಿಸುವ ಕುರಿತು

1248 -ಶ್ರೀ ಮಂಜುನಾಥ್ ಸಿ. ಕುನ್ನೂರ್ (ಶಿಗ್ಗಾಂವ) : ಮಾನ್ಯ ಮುಖ್ಯ ಮಂತ್ರಿಗಳು ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ಹುಬ್ಬಳ್ಳಿ-ಧಾರವಾಡದಲ್ಲಿ ಹೈಕೋರ್ಟ್ ಬೆಂಚ್ ಸ್ಥಾಪನೆ ಮಾಡುವ ಬಗ್ಗೆ ಸರ್ಕಾರದವರು ಕೈಗೊಂಡಿರುವ ಕ್ರಮಗಳೇನು?

ಶ್ರೀ ಜೆ.ಹೆಚ್. ಪಟೇಲ್ (ಮುಖ್ಯ ಮಂತ್ರಿಗಳು) :

ಅ) ರಾಜ್ಯ ಸರ್ಕಾರ ಹುಬ್ಬಳ್ಳಿ - ಧಾರವಾಡ ನಗರದಲ್ಲಿ ಉಚ್ಚ ನ್ಯಾಯಾಲಯದ ಪೀಠವನ್ನು ಸ್ಥಾಪಿಸಲು ಬಹಳ ಕಾಲದಿಂದಲೂ ಪ್ರಯತ್ನಿಸುತ್ತಿದೆ. ಈ ಸಂಬಂಧದಲ್ಲಿ ಉಚ್ಚನ್ಯಾಯಾಲಯದ ಅನುಮತಿಯ ಅಗತ್ಯ ಇದ್ದು, ಅವರ ಅನುಮತಿ ಕೋರಿ ಮುಖ್ಯ ಮಂತ್ರಿಗಳು ಉಚ್ಚನ್ಯಾಯಾಲಯದ ಮುಖ್ಯ ನ್ಯಾಯಾಧೀಶರಿಗೆ ಹುಬ್ಬಳ್ಳಿ-ಧಾರವಾಡ ನಗರದಲ್ಲಿ ನ್ಯಾಯಪೀಠ ಸ್ಥಾಪಿಸಲು ಸ್ಥಳವನ್ನು ನೀಡಲು ಹಾಗೂ ನ್ಯಾಯಾಧೀಶರಿಗೆ ಅನೇಕ ಸೌಲಭ್ಯಗಳನ್ನು ಕಲ್ಪಿಸಲು ಸಿದ್ಧರಿದ್ದೇವೆ ಎಂಬ ಅಂಶವನ್ನು ಅವರ ಗಮನಕ್ಕೆ ತಂದು ಅವರ ಅನುಮೋದನೆಯನ್ನು ನಿರೀಕ್ಷಿಸಲಾಗುತ್ತಿದೆ. ಉಚ್ಚನ್ಯಾಯಾಲಯದ ಅನುಮೋದನೆ ದೊರೆತ ಕೂಡಲೇ ಹುಬ್ಬಳ್ಳಿ- ಧಾರವಾಡ ಮಹಾನಗರದಲ್ಲಿ ಉಚ್ಚ ನ್ಯಾಯಾಲಯದ ಪೀಠವನ್ನು ಸ್ಥಾಪಿಸಲು ಎಲ್ಲಾ ಕ್ರಮಗಳನ್ನು ತೆಗೆದುಕೊಳ್ಳಲಾಗುವುದು.

ತಿಪಟೂರು ತಾಲ್ಲೂಕು ಕಿಬ್ಬನಹಳ್ಳಿ ಕ್ರಾಸ್ ಬಳಿ ವಿದ್ಯುಚ್ಛಕ್ತಿ ಉಪವಿಭಾಗ.

1250 -ಶ್ರೀ ಜೆ.ಸಿ. ಮಾಧುಸ್ವಾಮಿ (ಚಿಕ್ಕನಾಯಕನಹಳ್ಳಿ) : ಮಾನ್ಯ ಇಂಧನ ರಾಜ್ಯ ಸಚಿವರು. ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ತಿಪಟೂರು ಉಪ ವಿಭಾಗದಲ್ಲಿರುವ ತಾಲ್ಲೂಕುಗಳನ್ನೊಳಗೊಂಡಂತೆ ಕಿಬ್ಬನಹಳ್ಳಿ ಕ್ರಾಸ್ ಬಳಿ ಒಂದು ವಿದ್ಯುಚ್ಛಕ್ತಿ ಇಲಾಖೆಯ ವಿಭಾಗವನ್ನು ಆರಂಭ ಮಾಡಬೇಕೆಂಬ ಪ್ರಸ್ತಾಪ ಸರ್ಕಾರದ ಮುಂದೆ ಇದೆಯೇ?